# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 821

ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 25-09-2020

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಮೈಸೂರಿನಿಂದ ನಂಜನಗೂಡಿಗೆ ಮತ್ತು ನಂಜನಗೂಡು ಮೂಲಕ ಚಾಮರಾಜನಗರ, ಗುಂಡ್ಲುಪೇಟೆ ಕಡೆಗೆ ಸಂಚರಿಸುವ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು ನಂಜನಗೂಡಿನಲ್ಲಿ ನೂತನವಾಗಿ ನಿರ್ಮಿಸಿರುವ ಬಸ್ ನಿಲ್ದಾಣಕ್ಕೆ ಹೋಗಿ ನಿಲುಗಡೆ ಮಾಡದೆ, ಹಳೆಯ ಬಸ್ ನಿಲ್ದಾಣದಲ್ಲೇ ನಿಲುಗಡೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನೂತನ ಬಸ್ ನಿಲ್ದಾಣವು ರೈಲ್ವೆ ನಿಲ್ದಾಣ, ಖಾಸಗಿ ಬಸ್ ನಿಲ್ದಾಣ, ದೇವಾಲಯಗಳಿಗೆ ಸಮೀಪದಲ್ಲಿದ್ದರೂ ಬಸ್‌ಗಳು ಇಲ್ಲಿಗೆ ಹೋಗದಿರಲು ಕಾರಣಗಳೇನು; | ಪ್ರಸ್ತುತ ನಂಜನಗೂಡಿನಲ್ಲಿ ಎರಡು ಬಸ್ ನಿಲ್ದಾಣಗಳಿದ್ದು, ನೂತನ ಬಸ್ ನಿಲ್ದಾಣವು ನಂಜನಗೂಡಿನಿಂದ ಹೊರವಲಯದಲ್ಲಿದ್ದು, ವಿರಳ ಜನ ಸಂಖ್ಯೆ ಹೊಂದಿರುವುದರಿಂದ ಹಾಗೂ ಕೋವಿಡ್-19ರ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಒಂದು ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡುವುದು ಸೂಕ್ತವಾಗಿರುವುದರಿಂದ ಹಾಗೂ ನೂತನ ಬಸ್ ನಿಲ್ದಾಣದ ಮುಖ್ಯದ್ವಾರದ ಮುಂಭಾಗದಲ್ಲಿ ಹಳ್ಳಕೊಳ್ಳವಿರುವುದರಿಂದ ಹಳೆಯ ಬಸ್ ನಿಲ್ದಾಣದಿಂದ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. |
| ಆ. | ನೂತನ ಬಸ್ ನಿಲ್ದಾಣದಲ್ಲೇ ಬಸ್‌ಗಳನ್ನು ನಿಲುಗಡೆ ನೀಡುವಂತೆ ರಾಜ್ಯ ರಸ್ತೆ ಸಾರಿಗೆ ಬಸ್ ವಾಹನ ಚಾಲಕರಿಗೆ, ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ಕಟ್ಟುನಿಟ್ಟಾದ ಸೂಚನೆ ನೀಡಲಾಗುವುದೇ; | ಕೋವಿಡ್-19 ಹಿನ್ನೆಲೆಯಲ್ಲಿ ವಿಧಿಸಲಾಗಿದ್ದ ಲಾಕ್‌ಡೌನ್‌ನ್ನು ಪ್ರಸ್ತುತ ಸಡಿಲಗೊಳಿಸಿರುವ ಹಿನ್ನೆಲೆಯಲ್ಲಿ ಹಾಗೂ ನೂತನ ಬಸ್ ನಿಲ್ದಾಣದ ಮುಖ್ಯದ್ವಾರದ ಮುಂಭಾಗದ ಕಾಮಗಾರಿ ಪೂರ್ಣಗೊಂಡಿರುವುದರಿಂದ, ವಾಹನಗಳ ಕಾರ್ಯಾಚರಣೆಯನ್ನು ನೂತನ ಬಸ್ ನಿಲ್ದಾಣದಿಂದ ಆಚರಣೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಈ ಬಗ್ಗೆ ಸಂಬಂಧಪಟ್ಟ ಚಾಲನಾ ಸಿಬ್ಬಂದಿ ಮತ್ತು ಅಧಿಕಾರಿಗಳಿಗೆ ಸೂಕ್ತ ಸೂಚನೆಗಳನ್ನು ನೀಡಲಾಗುವುದು. |
| ಇ. | ನೂತನ ಬಸ್ ನಿಲ್ದಾಣದಲ್ಲಿ ಇನ್ನೂ ಕೆಲವು ಕಾಮಗಾರಿಗಳು ನಡೆಯುತ್ತಿವೆಯೇ; ಈ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಿ, ನಿಲ್ದಾಣವನ್ನು ಸುಸಜ್ಜಿತಗೊಳಿಸಲಾಗುವುದೇ? | ಪ್ರಸಕ್ತ ಸಾಲಿನಲ್ಲಿ ನಂಜನಗೂಡು ಬಸ್ ನಿಲ್ದಾಣದಲ್ಲಿ ಕೂಡುರಸ್ತೆಗೆ (Approach road) ಕಾಂಕ್ರೀಟೀಕರಣದ ಕಾಮಗಾರಿ ಮಾಡಿ ಪೂರ್ಣಗೊಳಿಸಲಾಗಿರುತ್ತದೆ ಹಾಗೂ ಪ್ರಸ್ತುತ ಯಾವುದೇ ಕಾಮಗಾರಿಗಳು ಬಾಕಿ ಉಳಿದಿರುವುದಿಲ್ಲ. ನಂಜನಗೂಡು ಬಸ್ ನಿಲ್ದಾಣವನ್ನು ಎಲ್ಲಾ ಮೂಲಭೂತ ಸೌಲಭ್ಯಗಳನ್ನೊಳಗೊಂಡಂತೆ ಸುಸಜ್ಜಿತವಾಗಿ ನಿರ್ಮಿಸಲಾಗಿದೆ. |

ಸಂಖ್ಯೆ: ಟಿಡಿ 159 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು